ಅ) ಮೂಡಿಗೆರೆ ತಾಲ್ಲೂಕಿನಲ್ಲಿ ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಗೆ ಬರುವ ಕೆರೆಗಳು ಹಾಗೂ ಅಣೆಕಟ್ಟುಗಳ ಸಂಖ್ಯೆ ಎಷ್ಟು?

ಆ) ಈ ಸಾರಿ ಭಾರಿ ಮಳೆಯಿಂದ ಇವುಗಳಿಗೆ ಹಾನಿಯಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಹಾನಿಗೊಂಡಿರುವ ಕೆರೆ, ಅಣೆಕಟ್ಟುಗಳ ದುರಸ್ತಿಗೊಳಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಕೆ.ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು)

ಅ) ಮೂಡಿಗೆರೆ ತಾಲ್ಲೂಕಿನಲ್ಲಿ ಸಣ್ಣ ನೀರಾವರಿ ವಲಯದ ವ್ಯಾಪ್ತಿಯಲ್ಲಿ ಯಾವುದೇ ಕೆರೆಗಳು ಇರುವುದಿಲ್ಲ. ಸಣ್ಣ ನೀರಾವರಿ ವ್ಯಾಪ್ತಿಯಲ್ಲಿ ಬರುವ ಅಣೆಕಟ್ಟುಗಳು ಎರಡು. (1) ಕೋವಿ ಪಿಕಪ್ ಚಾನಲ್ (2) ಮುರುಡನಕೆರೆ ಚಾನಲ್.

ಆ) ಯಾವ ಹಾನಿಯೂ ಆಗಿರುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಭಾರಿ ನೀರಾವರಿ ಯೋಜನೆಗಳು

2127 - ಶ್ರೀ ಡಿ.ಬಿ. ಚಂದ್ರೇಗೌಡ (ತೀರ್ಥಹಳ್ಳಿ) : ಮಾನ್ಯ ಭಾರಿ ಹಾಗೂ ಮಧ್ಯಮ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) 1989 ರಿಂದ 1991 ರವರೆಗೆ ರಾಜ್ಯದಲ್ಲಿ ಹೊಸದಾಗಿ ಮಂಜೂರಾದ ಭಾರಿ ನೀರಾವರಿ ಯೋಜನೆಗಳ ಸಂಖ್ಯೆ ಎಷ್ಟು? (ಅವುಗಳ ಹೆಸರುಗಳನ್ನೊಳಗೊಂಡ ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)?

ಆ) ಪ್ರತಿಯೊಂದು ನೀರಾವರಿ ಯೋಜನೆಗಳಿಗೆ ತಗಲುವ ವೆಚ್ಚ ಎಷ್ಟು?

ಇ) ಇದರ ಜಾರಿಗಾಗಿ ಈಗಾಗಲೇ ಬಿಡುಗಡೆ ಮಾಡಲಾದ ಹಣವೆಷ್ಟು ಹಾಗೂ ಖರ್ಚಾದ ಹಣವೆಷ್ಟು?

ಈ) ಈ ಯೋಜನೆಗಳ ಕಾರ್ಯ ಯಾವ ಹಂತದಲ್ಲಿದೆ ಹಾಗೂ ಇವುಗಳನ್ನು ಎಂದು ಪೂರ್ಣಗೊಳಿಸಲಾಗುವುದು?

ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು)

ಅ) ಯಾವುದೂ ಇಲ್ಲ.

ಇ) ಮೇಲಿನ ಪ್ರಶ್ನೆ (ಅ)ಗೆ ನೀಡಿರುವ ಉತ್ತರದಿಂದ ಈ ಪ್ರಶ್ನೆಗಳಿಗೆ ಉತ್ತರ ಉದ್ಭವಿಸುವುದಿಲ್ಲ.

ಹಳ್ಳಿ ರಸ್ತೆಗಳ ದುರಸ್ತಿ

2291 - ಶ್ರೀ ಸಿ. ವೀರಭದ್ರಯ್ಯ (ಕೊರಟಗೆರೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) ನೆಲಮಂಗಲ ತಾಲ್ಲೂಕು, ತ್ಯಾಮಗೊಂಡ್ಲು ಹೋಬಳಿ ನಿಡವಂದದಿಂದ ಮೂವತ್ತೂರು ಗ್ರಾಮಕ್ಕೆ ಹೋಗುವ ರಸ್ತೆ ತೀರ ಕೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸದರಿ ರಸ್ತೆ ಕೆಲಸವನ್ನು ದುರಸ್ತಿ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಜಿ.ಹೆಚ್. ಅಶ್ವತ್ಥರೆಡ್ಡಿ (ಲೋಕೋಪಯೋಗಿ ಸಚಿವರು)

ಅ) ಈ ರಸ್ತೆಯು ವಾಹನ ಸಂಚಾರಕ್ಕೆ ಯೋಗ್ಯವಾಗಿದೆ.